**3ನೇ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯ, ಹಾಸನ**

**ಎಸ್.ಸಿ.ನಂಃ 263/ 2023**

**ಚಾಸಾ-4, ಪ್ರಾಸಾ-4**

| | | |
|---|---|---|
| ಸಾಕ್ಷಿದಾರರ ಹೆಸರು | : | ಹೇಮಲತಾ |
| ಗಂಡನ ಹೆಸರು | : | ರಂಗಸ್ವಾಮಿ |
| ವಯಸ್ಸು | : | 33 ವರ್ಷ |
| ಉದ್ಯೋಗ | : | ಗೃಹಿಣಿ |
| ವಾಸಸ್ಥಳ | : | ಸಕಲೇಶಪುರ, ಹಾಸನ |

**ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಿದ ದಿನಾಂಕಃ 31.01.2025.**

**ಮುಖ್ಯ ವಿಚಾರಣೆಃ ಸರ್ಕಾರಿ ಅಭಿಯೋಜಕರಿಂದಃ**

1. ಚಾಸಾ-2 ಹಾಗೂ 3 ನನ್ನ ಅತ್ತೆ ಹಾಗೂ ಸೋದರ ಮಾವ. ಚಾಸಾ-1 ನನ್ನ ಸೋದರ ಮಾವನ ಮಗಳು. ಚಾಸಾ-1 ಶುಶ್ರೂಷಕಿ. ಆಕೆ ಯಾವುದೇ ಕೆಲಸ ಮಾಡುತ್ತಿರಲಿಲ್ಲ. ನ್ಯಾಯಾಲಯದ ಮುಂದಿರುವ ಆರೋಪಿತರ ಪರಿಚಯ ನನಗೆ ಇರುವುದಿಲ್ಲ. 1ನೇ ಆರೋಪಿಯು ಚಾಸಾ-1 ರವರಿಗೆ ಪೋನ್ ಮೂಲಕ ಸಂದೇಶ ಕಳುಹಿಸುತ್ತಿದ್ದ ಬಗ್ಗೆ ಹಾಗೂ ಮಾತನಾಡುತ್ತಿದ್ದ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ. 1ನೇ ಆರೋಪಿಯು ಚಾಸಾ-1 ರವರನ್ನು ಮದುವೆ ಮಾಡಿಕೊಳ್ಳುತ್ತೇನೆ ಎಂದು ಪ್ರಸ್ತಾಪ ಮಾಡಿದ್ದ ಬಗ್ಗೆ ನನಗೆ ಮಾಹಿತಿ ಇಲ್ಲ. 1ನೇ ಆರೋಪಿಯು ಚಾಸಾ-1 ರವರನ್ನು ಎಲ್ಲಿಗೂ ಕರೆಸಿ, ಯಾವುದೇ ಮನೆಯಲ್ಲಿ ಆಕೆಯ ಇಚ್ಛೆಯ ವಿರುದ್ಧವಾಗಿ ದೈಹಿಕ ಸಂಪರ್ಕ ಮಾಡಿ, ಆ ಸಂದರ್ಭದಲ್ಲಿ ಆ ಖಾಸಗಿ ಕ್ಷಣಗಳ ಪೋಟೋ ಹಾಗೂ ವೀಡಿಯೋ ಚಿತ್ರೀಕರಣ ಮಾಡಿ ನಂತರ ಆಕೆಗೆ ಹಣವನ್ನು ಕೊಡುವಂತೆ ಬೆದರಿಕೆ ಹಾಕಿದ್ದ ಬಗ್ಗೆ ಹಾಗೂ ಇಲ್ಲವಾದರೆ ಸದರಿ ಖಾಸಗಿ ಛಾಯಾಚಿತ್ರ ಹಾಗೂ ವೀಡಿಯೋ ಚಿತ್ರೀಕರಣಗಳನ್ನು ಆತನ ಸ್ನೇಹಿತರಿಗೆ ಕಳುಹಿಸಿದ್ದ ಬಗ್ಗೆ ನನಗೆ ಯಾವುದೇ ವೈಯಕ್ತಿಕ ಮಾಹಿತಿ ಇರುವುದಿಲ್ಲ ಮತ್ತು ಆ ಸಂದರ್ಭದಲ್ಲಿ ಚಾಸಾ-1 ರವರು, ನಮ್ಮ ಮನೆಗೆ ಬಂದಿಲ್ಲ. ಸದರಿ ವೀಡಿಯೋವನ್ನು 2ನೇ ಆರೋಪಿತನ ಮೊಬೈಲ್ ನಲ್ಲಿ ಚಿತ್ರೀಕರಣ ಮಾಡಿರುವ ಬಗ್ಗೆ ನನಗೆ ಯಾವುದೇ ವೈಯಕ್ತಿಕ ಮಾಹಿತಿ ಇರುವುದಿಲ್ಲ. ಆರೋಪಿತರು ಎಸಗಿರುವ ಕೃತ್ಯದ ವಿಚಾರವನ್ನು ಚಾಸಾ-1 ರವರು

ಯಾವತ್ತೂ ನನಗೆ ತಿಳಿಸಿಲ್ಲ. ಈ ಸಂಬಂಧ ಪೊಲೀಸರಿಗೆ ನಾನು ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ.

(ಈ ಸಂದರ್ಭದಲ್ಲಿ ಮಾನ್ಯ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ಕೋರಿರುತ್ತಾರೆ, ದಾಖಲೆಗಳನ್ನು ಪರಿಶೀಲಿಸಿ, ಪಾಟೀಸವಾಲಿಗೆ ಅನುಮತಿ ನೀಡಿದೆ)

**ಪಾಟೀಸವಾಲುಃ ಸರ್ಕಾರಿ ಅಭಿಯೋಜಕರಿಂದಃ**

2. ದಿಃ 22.08.2023 ರಂದು ನಾನು ಪೊಲೀಸರಿಗೆ ನೀಡಿದ ಹೇಳಿಕೆಯಲ್ಲಿ "ನಾನು ಮೇಲೆ ತಿಳಿಸಿರುವ ವಿಳಾಸದಲ್ಲಿ ವಾಸವಾಗಿರುತ್ತೇನೆ ------------------------------------

----------------------------------------------------------------------------------

------------------------ ಪ್ರಕರಣ ದಾಖಲಿಸಿರುವ ವಿಚಾರ ನನಗೆ ಗೊತ್ತಿರುತ್ತೆ" ಎಂಬುದಾಗಿ ಈಗ ಓದಿ ಹೇಳಿದಂತೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯ ಭಾಗವನ್ನು ಸಾಕ್ಷಿಗೆ ಓದಿ ಹೇಳಲಾಗಿ ಅದನ್ನು ಸಾಕ್ಷಿಯು ಸಂಪೂರ್ಣವಾಗಿ ಅಲ್ಲಗಳೆದಿರುತ್ತಾರೆ. ಸದರಿ ಹೇಳಿಕೆಯ ಭಾಗವನ್ನು ನಿಪಿ-10 ಎಂದು ಗುರುತಿಸಲಾಯಿತು. ಪ್ರಕರಣ ಸಂಬಂಧ ನಿಪಿ-10 ರಂತೆ ಆರೋಪಿತರ ವಿರುದ್ಧ ಹೇಳಿಕೆಯನ್ನು ನೀಡಿದ್ದರೂ ಸಹ, ಆರೋಪಿತರಿಗೆ ಶಿಕ್ಷೆಯಾಗುವುದನ್ನು ತಪ್ಪಿಸಲು ನ್ಯಾಯಾಲಯದ ಮುಂದೆ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀಸವಾಲುಃ ಆಪಾದಿತರ ಪರ ಶ್ರೀ ವಿ.ಎಂ ವಕೀಲರಿಂದಃ**

ಆರೋಪಿಗಳ ಪರ ಯಾವುದೇ ಪಾಟೀಸವಾಲು ಇಲ್ಲ ಎಂದು ಹೇಳಿರುತ್ತಾರೆ.

**ಮರು ವಿಚಾರಣೆಃ** ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಸಾಕ್ಷ್ಯವನ್ನು ನನ್ನ ಸಮಕ್ಷಮ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇದೆ

3ನೇ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು,

ಎಸ್.ಸಿ.ನಂ: 263/23 ಪ್ರಾಸಾ-4

ಹಾಸನ.